## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಫ.ನಿ.ಗುಡ್ಡಾಕಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ಇಲಾಖಾ ವಿಚಾರಣಾಧಿಕಾರಿಗಳು ಇವರಿಗೆ ಸಂಚಿತ ಸಂಭಾವನೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 6 ಸೇಇವಿ 2010, ದಿ:28.04.2011
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 98 ಪಬವ 20135 ದಿ:07.08.2015
3. ವಿಚಾರಣಾಧಿಕಾರಿಯವರ ವರದಿ ದಿನಾಂಕ: 23.01.2016

****

**ಪ್ರಸ್ತಾವನೆ:**

2009-10 ಮತ್ತು 2010-11ನೇ ಸಾಲಿನಲ್ಲಿ ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲ್ಲೂಕಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ನಿರ್ವಹಿಸಿದ ಕಾಮಗಾರಿಗಳ ಸ್ಥಳದಲ್ಲಿ ನಾಮಫಲಕ ಅಳವಡಿಸುವ ಕುರಿತು ರೂ. 4.20.ಲಕ್ಷ ಮೊತ್ತಕ್ಕೆ ಟೆಂಡರ್ ಕರೆಯದೆ ನಾಮಫಲಕಗಳನ್ನು ಖರೀದಿಸಿದ್ದು, ಇದು ಸ್ಪರ್ಧಾತ್ಮಕ ಬೆಲೆಗಳ ಲಾಭದಿಂದ ವಂಚಿತಗೊಳಿಸಿದಂತಾಗುತ್ತದೆ ಎಂದು ಮಹಾಲೇಖಪಾಲರು, ಸಿ.ಎ.ಜಿ. ಆಡಿಟ್ ವರದಿಯ ಕಂಡಿಕೆ 2.2.5.4 ರ ಪ್ರಕಾರ ಆಕ್ಷೇಪಣೆಯನ್ನು ವ್ಯಕ್ತಪಡಿಸಿದ್ದುದರಿಂದ, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕ ಅಧಿನಿಯಮ 1999 ರನ್ನು ಉಲ್ಲಂಘಿಸಿದ್ದ ಹಾಗೂ ಇನ್ನಿತರೆ ಆರೋಪಗಳಿಗೆ ಸಂಬಂಧಿಸಿದಂತೆ, ಹಾವೇರಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಬ್ಯಾಡಗಿ ತಾಲ್ಲೂಕು ಪಂಚಾಯತ್‌ನಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಎಸ್.ಆರ್.ಪಾಟೀಲ್, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11 ರ ಪ್ರಕಾರ ದಿನಾಂಕ: 06.05.2015 ರಂದು ಜಾರಿ ಮಾಡಲಾಗಿದ್ದ ಕಾರಣ ಕೇಳುವ ನೋಟೀಸಿಗೆ ಅಧಿಕಾರಿಯು ನೀಡಿದ್ದ ಲಿಖಿತ ರಕ್ಷಣಾ ಹೇಳಿಕೆಯು ತೃಪ್ತಿಕರವಾಗಿಲ್ಲದ ಕಾರಣ, ಪ್ರಕರಣದ ಸತ್ಯಾಸತ್ಯತೆಯನ್ನು ತಿಳಿಯಲು ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ 11 ರ ಪ್ರಕಾರ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು, ಅದೇ ನಿಯಮಾವಳಿಗಳ ನಿಯಮ -11 (2)ರ ಪ್ರಕಾರ ಮೇಲೆ (2) ರಲ್ಲಿ ಓದಲಾದ ದಿನಾಂಕ: 07.08.2015ರ ಸರ್ಕಾರಿ ಆದೇಶದಲ್ಲಿ, ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿದ್ದ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಫ.ಸಿ.ಗುಡ್ಡಾಕಾರ, ಇವರು ಮೇಲೆ (3) ರಲ್ಲಿ ಓದಲಾದ ಪತ್ರ ದಿನಾಂಕ: 23.01.2016ರ ರೊಂದಿಗೆ ಶಿಸ್ತುಪ್ರಾಧಿಕಾರಿಯಾದ ಸರ್ಕಾರಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿ, ರೂ. 15,000/-ಗಳ ಸಂಭಾವನೆಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು, ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದರಿಂದ, ವಿಚಾರಣಾಧಿಕಾರಿಯವರಿಗೆ ಅವರ ನೇಮಕಾತಿ ಸಂಧರ್ಭದಲ್ಲಿ ಚಾಲ್ತಿಯಲ್ಲಿದ್ದಂತೆ ಸಂಚಿತ ಸಂಭಾವನೆ ಹಾಗೂ ವಾಹನ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 98 ಪಬವ 2015 ಬೆಂಗಳೂರು ದಿನಾಂಕ: 18-02-2016</u>**

ಶ್ರೀ ಫ.ಸಿ.ಗುಡ್ಡಾಕಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿ, ಇವರಿಗೆ ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 6 ಸೇಇವಿ 2010, ದಿನಾಂಕ:28.04.2011ರ ಪ್ರಕಾರ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ.15,000/- (ರೂ. ಹದಿನೈದು ಸಾವಿರಗಳು ಮಾತ್ರ) ಗಳ ಸಂಭಾವನೆ ಮಂಜೂರು ಮಾಡಿದೆ.

ಶ್ರೀ ಫ.ಸಿ.ಗುಡ್ಡಾಕಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು, ಇವರಿಗೆ ಸದರಿ ಮೊತ್ತವನ್ನು ಪಾವತಿಸುವ ಕುರಿತು ಕೂಡಲೇ ಅಗತ್ಯ ಕ್ರಮ ವಹಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

18/2/16

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ &ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಇವರಿಗೆ,</u>**

1) ಮಹಾಲೇಖಪಾಲರು,(ಎ & ಇ) ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ
3) ಶ್ರೀ ಫ.ಸಿ.ಗುಡ್ಡಾಕಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಇಲಾಖಾ ವಿಚಾರಣಾಧಿಕಾರಿಗಳು, ಧಾರವಾಡ
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
5) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅಪಂ.ರಾಜ್ ಇಲಾಖೆ
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.